| | | |
|---|---|---|
| ಹಾಸನ ತಾ: ಅಟ್ಟಾವರ ಹೊಸಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತ, ದಿನಾಂಕ: 19-06-2012ರ ದಿನಪತ್ರಿಕೆಯಲ್ಲಿ ಅಟ್ಟಾವರ ಹೊಸಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಆಹಾರ ಸೇವನೆಯಿಂದ ಮಕ್ಕಳು ಅಸ್ವಸ್ಥಗೊಂಡು ಹಾಸನ ಮತ್ತು ದುದ್ದ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಯನ್ನು ಪಡೆದಿರುವ ಬಗ್ಗೆ ಪ್ರಕಟವಾಗಿದೆ. ಆದ್ದರಿಂದ, ಸದರಿ ಮೊರಾರ್ಜಿ ವಸತಿ ಶಾಲೆಗೆ ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಅಗತ್ಯವಾಗಿರುತ್ತದೆ ಎಂದು ತಿಳಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹಾಸನ ತಾಲ್ಲೂಕು ಅಟ್ಟಾವರ ಹೊಸಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಅವಶ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಎಂ.ಕೆ.ದೇವಪ್ಪ ಮಲ್ಲಿಗೆವಾಳು)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ

| | | | |
|---|---|---|---|
| | ಶ್ರೀ ಜಿ.ಬಂಗಾರಪ್ಪ ಅವರು ಬರೆದಿರುವ ದಕ್ಷಿಣದ ದೃವತಾರೆಗಳು ಎಂಬ ಪುಸ್ತಕವನ್ನು ಖರೀದಿಸಿ ವಿದ್ಯಾರ್ಥಿ ನಿಲಯಗಳಿಗೆ ನೀಡುವ ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಮಾತನಾಡುತ್ತಾ, ಶ್ರೀ ಜಿ.ಬಂಗಾರಪ್ಪರವರು ದಕ್ಷಿಣದ ದೃವತಾರೆಗಳು ಎಂಬ ಪುಸ್ತಕವನ್ನು ಬರೆದಿದ್ದು, ಈ ಪುಸ್ತಕವನ್ನು ಖರೀದಿಸಿ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಿಗೆ ನೀಡಿದಲ್ಲಿ ಮಕ್ಕಳ ಜ್ಞಾನಾರ್ಜನೆಗೆ ಹೆಚ್ಚಿನ ಅನುಕೂಲವಾಗುತ್ತದೆ. ಆದ್ದರಿಂದ, ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಹಾಗೂ ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಜಿ.ಬಂಗಾರಪ್ಪರವರು ಬರೆದಿರುವ ದಕ್ಷಿಣದ ದೃವತಾರೆಗಳು ಎಂಬ ಪುಸ್ತಕವನ್ನು ಖರೀದಿಸಿ ವಿದ್ಯಾರ್ಥಿನಿಲಯಗಳಿಗೆ ನೀಡಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀ ಜಿ.ಬಂಗಾರಪ್ಪರವರು ಬರೆದಿರುವ ದಕ್ಷಿಣದ ದೃವತಾರೆಗಳು ಎಂಬ ಪುಸ್ತಕವನ್ನು ಖರೀದಿಸಿ ವಿದ್ಯಾರ್ಥಿನಿಲಯಗಳಿಗೆ ನೀಡಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮತ್ತು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 8 | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ವರ್ಗಾಯಿಸಿಕೊಂಡು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಬಗ್ಗೆ. | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, 2012–13ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಕಾಲೇಜು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಗ್ರಾಮೀಣ ಪ್ರದೇಶದಿಂದ ಹೆಚ್ಚಿನ ವ್ಯಾಸಂಗಕ್ಕಾಗಿ ನಗರ ಪ್ರದೇಶಗಳಲ್ಲಿ ದಾಖಲಾಗಿದ್ದು, ಸರಿಯಾದ ಬಸ್ಸಿನ ಸೌಕರ್ಯವಿಲ್ಲದ ಕಾರಣ, ವಿದ್ಯಾರ್ಥಿನಿಲಯದ ಅವಕಾಶಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಆದರೆ, ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾತಿ ಸಂಖ್ಯೆ ಕಡಿಮೆಯಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಸ್ಥಳಾವಕಾಶ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಜಿಲ್ಲೆಯ ಗ್ರಾಮೀಣ/ತಾಲ್ಲೂಕು ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳು ಲಭ್ಯವಿಲ್ಲದೆ ಸ್ಥಾನಗಳು ಖಾಲಿ ಉಳಿದಿರುತ್ತವೆ. ಅಂತಹ ಖಾಲಿ ಸ್ಥಾನಗಳನ್ನು ನಗರ ಪ್ರದೇಶಗಳಿಗೆ ವರ್ಗಾಯಿಸಿಕೊಂಡು ಅವಶ್ಯಕತೆಯಿರುವ ಕಡೆಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ತೆರೆಯಲು ಸಭೆಯ ಅನುಮತಿ ನೀಡಬೇಕೆಂದು ಕೋರಿದರು.<br>ಇದಕ್ಕೆ ಸಮಿತಿಯ ಎಲ್ಲಾ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಹೆಚ್ಚಿನ ವ್ಯಾಸಂಗಕ್ಕಾಗಿ ನಗರ ಪ್ರದೇಶಗಳಿಗೆ ಆಗಮಿಸುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಜಿಲ್ಲೆಯ ಗ್ರಾಮೀಣ/ತಾಲ್ಲೂಕು ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ನಗರ ಪ್ರದೇಶಗಳಿಗೆ ವರ್ಗಾಯಿಸಿಕೊಂಡು ಅವಶ್ಯಕತೆಯಿರುವ ಕಡೆಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | ಶೇ.22.75ರ ಹಣವನ್ನು ಸಮರ್ಪಕವಾಗಿ ಖರ್ಚು ಮಾಡುವ ಸಲುವಾಗಿ ಸದರಿ ಹಣದಲ್ಲಿ ಡಿ.ಜಿ. ಎಸ್.ಅಂಡ್ ಡಿ ದರ ದಲ್ಲಿ ಸೋಲಾರ್ ದೀಪ ಗಳನ್ನು ಅಳವಡಿಸುವ ಬಗ್ಗೆ. | ಅಳವಡಿಸಲು ಕ್ರಮ ವಹಿಸಬೇಕೆಂದು ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ತಿಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಜಿಲ್ಲೆಯಲ್ಲಿ ನಡೆಯುತ್ತಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರದ ನಿರ್ದೇಶನದಂತೆ ಶೇ.25ರಷ್ಟು ಪರಿಶಿಷ್ಟ ಜಾತಿ/ವರ್ಗಗಳ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲಾಗುತ್ತಿದೆ. ಆದ್ದರಿಂದ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿನಿಲಯಗಳಿಗೆ ಸೋಲಾರ್ ದೀಪಗಳನ್ನು ಅಳವಡಿಸುವ ಬಗ್ಗೆ ಗ್ರಾಮ ಪಂಚಾಯಿತಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | ಜಾತಿ/ ವರ್ಗಗಳ ಕಾಲೋನಿಗಳಿಗೆ, ಮನೆಗಳಿಗೆ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯ ಯೋಜನೆಯಡಿಯಲ್ಲಿ ಸೋಲಾರ್ ದೀಪಗಳನ್ನು ಅಳವಡಿಸುವ ಬಗ್ಗೆ ಗ್ರಾಮ ಪಂಚಾಯಿತಿಗಳಿಗೆ ನಿರ್ದೇಶನ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 5 | ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಹಾಗೂ ಬಿ.ಸಿ.ಎಂ. ಇಲಾಖೆಯ ಎಲ್ಲಾ ವಿದ್ಯಾರ್ಥಿ/ವಿದ್ಯಾರ್ಥಿನಿ ನಿಲಯಗಳಿಗೆ ಬೆಂಕಿ ನಂದಿಸುವ ಯಂತ್ರವನ್ನು ಅಳವಡಿಸುವ ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಂ.ಕೆ.ದೇವಪ್ಪಮಲ್ಲಿಗೆವಾಳುರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಬೆಂಕಿ ನಂದಿಸುವ ಯಂತ್ರವನ್ನು ಅಳವಡಿಸುವುದು ಅಗತ್ಯವಿದ್ದು, ಬೆಂಕಿ ನಂದಿಸುವ ಯಂತ್ರಗಳನ್ನು ಖರೀದಿಸಿ ವಿದ್ಯಾರ್ಥಿನಿಲಯಗಳಿಗೆ ಅಳವಡಿಸಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಬೆಂಕಿ ನಂದಿಸುವ ಯಂತ್ರವನ್ನು ಖರೀದಿಸಿ ಅಳವಡಿಸಲು ಕ್ರಮ ವಹಿಸುವಂತೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮತ್ತು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 6 | ಜಿಲ್ಲೆಯ ಎಲ್ಲಾ ಅಂಗನ ವಾಡಿ ಕೇಂದ್ರಗಳಿಗೆ ಸಂರಕ್ಷಣಾ ಕ್ರಮವಾಗಿ ಬೆಂಕಿನಂದಿಸುವ ಯಂತ್ರ ಗಳನ್ನು ಅಳವಡಿಸುವ ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಂ.ಕೆ.ದೇವಪ್ಪಮಲ್ಲಿಗೆವಾಳುರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸಂರಕ್ಷಣಾ ಕ್ರಮವಾಗಿ ಬೆಂಕಿ ನಂದಿಸುವ ಯಂತ್ರವನ್ನು ಖರೀದಿಸಿ ಅಳವಡಿಸುವುದು ಅವಶ್ಯಕವಾಗಿದ್ದು, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಕಟ್ಟಡಗಳಿಗೆ ಸಂರಕ್ಷಣಾ ಕ್ರಮವಾಗಿ ಬೆಂಕಿ ನಂದಿಸುವ ಯಂತ್ರಗಳನ್ನು ಖರೀದಿಸಿ ಅಳವಡಿಸಲು ಕ್ರಮ ವಹಿಸುವಂತೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | | |
|---|---|---|---|---|
| | | | ಅಂಗವಿಕಲರಿಗಾಗಿ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು | |
| | | | ಒಟ್ಟು 679.28 | |
| 2 | ವಿದ್ಯಾರ್ಥಿನಿಲಯದ ವರ್ಗಾವಣೆ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾ: ರಾಯರಕೊಪ್ಪಲು ಗ್ರಾಮದಲ್ಲಿ ಈಗ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯವು ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಆಲೂರು ತಾಲ್ಲೂಕು ಕಾಮತಿ ಕೂಡಿಗೆ ಗ್ರಾಮದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯಾರ್ಥಿಗಳು ಲಭ್ಯವಿರುತ್ತಾರೆ. ಆದ್ದರಿಂದ, ಸದರಿ ವಿದ್ಯಾರ್ಥಿನಿಲಯವನ್ನು ಕಾಮತಿ ಕೂಡಿಗೆ ಗ್ರಾಮಕ್ಕೆ ವರ್ಗಾವಣೆ ಮಾಡುವುದು ಸೂಕ್ತವಾಗಿದ್ದು, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಒಂದೇ ತಾಲ್ಲೂಕಿನಲ್ಲಿ ಒಂದು ಗ್ರಾಮದಿಂದ ಇನ್ನೊಂದು ಗ್ರಾಮಕ್ಕೆ ವಿದ್ಯಾರ್ಥಿನಿಲಯವನ್ನು ವರ್ಗಾವಣೆ ಮಾಡಲು ಅವಕಾಶವಿದ್ದು, ಈ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು. | | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಕೋರಿದಂತೆ ಆಲೂರು ತಾ: ರಾಯರಕೊಪ್ಪಲು ಗ್ರಾಮದಲ್ಲಿ ನಡೆಯುತ್ತಿದ್ದ ವಿದ್ಯಾರ್ಥಿನಿಲಯವನ್ನು ಕಾಮತಿ ಕೂಡಿಗೆ ಗ್ರಾಮಕ್ಕೆ ವರ್ಗಾವಣೆ ಮಾಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 3 | ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ನಿಗದಿ ಪಡಿಸಿರುವ ಅನುಪಾತಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ವರ್ಗಗಳ ಮಕ್ಕಳನ್ನು ಸೇರಿಸಿಕೊಳ್ಳಲು ಅನುಮೋದನೆ ನೀಡುವ ಬಗ್ಗೆ | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಶೇ.25ರಷ್ಟು ಹಿಂದುಳಿದ ವರ್ಗಗಳ ಮಕ್ಕಳನ್ನು ಸೇರಿಸಿಕೊಳ್ಳಲು ಅವಕಾಶವಿರುತ್ತದೆ. ಆದರೆ, ಕೆಲವು ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರಿಂದ ನಿಗದಿಪಡಿಸಿರುವ ಅನುಪಾತಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ವರ್ಗಗಳ ಮಕ್ಕಳು ದಾಖಲಾತಿ ಪಡೆಯಲು ಅರ್ಜಿ ಸಲ್ಲಿಸಿರುತ್ತಾರೆ. ಅಂತಹ ವಿದ್ಯಾರ್ಥಿನಿಲಯಗಳಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ವಿದ್ಯಾರ್ಥಿಗಳ ಸ್ಥಾನಗಳು ಖಾಲಿಯಿದ್ದಲ್ಲಿ ಜಿಲ್ಲಾ ಪಂಚಾಯಿತಿ ಅನುಮೋದನೆ ಪಡೆದುಕೊಂಡು ಪರಿಶಿಷ್ಟ ಜಾತಿ/ವರ್ಗಗಳ ವಿದ್ಯಾರ್ಥಿಗಳ ಸ್ಥಾನಗಳಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳುವಂತೆ ಆಯುಕ್ತರಿಂದ ನಿರ್ದೇಶನವಿರುತ್ತದೆ. ಆದ್ದರಿಂದ, ಎಲ್ಲೆಲ್ಲಿ ಅವಶ್ಯಕತೆಯಿದೆ ಅಂತಹ ವಿದ್ಯಾರ್ಥಿನಿಲಯಗಳಿಗೆ ನಿಗದಿಪಡಿಸಿರುವ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ವರ್ಗಗಳ ಮಕ್ಕಳನ್ನು ದಾಖಲು ಮಾಡಲು ಅನುಮೋದನೆಯನ್ನು ನೀಡಬೇಕೆಂದು ಕೋರಿದರು. | | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಪ್ರಸ್ತಾಪಿಸಿದಂತೆ, ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರ ನಿಗದಿ ಪಡಿಸಿರುವ ಅನುಪಾತಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ದಾಖಲಾತಿಗಾಗಿ ಅರ್ಜಿ ಸಲ್ಲಿಸಿದಲ್ಲಿ ಖಾಲಿ ಉಳಿಯುವ ಸ್ಥಾನಗಳಿಗೆ ದಾಖಲು ಮಾಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 4 | ಜಿಲ್ಲೆಯ 258 ಗ್ರಾಮ ಪಂಚಾಯಿತಿಗಳಲ್ಲಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗಗಳ | ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಶೇ.22.75ರಷ್ಟು ಅನುದಾನವನ್ನು ಕಡ್ಡಾಯವಾಗಿ ಪರಿಶಿಷ್ಟ ಜಾತಿ/ವರ್ಗದವರಿಗಾಗಿ ವಿನಿಯೋಗಿಸಬೇಕಾಗಿರುತ್ತದೆ. ಆದ್ದರಿಂದ, ಸದರಿ ಅನುದಾನದಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ಕಾಲೋನಿಗಳಿಗೆ ಮತ್ತು ಮನೆಗಳಿಗೆ ಸೋಲಾರ್ ಬೀದಿ ದೀಪಗಳನ್ನು | | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಗ್ರಾಮ ಪಂಚಾಯಿತಿಗಳಲ್ಲಿರುವ ಶೇ.22.75 ರಷ್ಟು ಅನುದಾನದಲ್ಲಿ ಪರಿಶಿಷ್ಟ |

**2.ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ:**

ಜಿಲ್ಲಾ ಅಧಿಕಾರಿಯವರು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಸಮಿತಿಗೆ ಈ ಕೆಳಕಂಡತೆ ನೀಡಿದರು.

| ಕ್ರಸಂ | ಲೆಕ್ಕಶೀರ್ಷಿಕೆ/ ಯೋಜನೆಯ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2225–00–103–0–26–ವಿದ್ಯಾರ್ಥಿನಿಲಯಗಳ ನಿರ್ವಹಣೆ | 440.03 |
| 2 | 2225–00–103–0–53–ಹೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ ಮತ್ತು ಹೊಸ ಕೇಂದ್ರಗಳ ಪ್ರಾರಂಭ | 3.00 |
| 3 | 2225–00–103–0–58–ವಕೀಲರಿಗೆ ಸ್ಟೈಫಂಡ್ | 8.25 |
| 4 | 2225–00–103–0–40–ಕಟ್ಟಡಗಳ ವೆಚ್ಚ ಮತ್ತು ನಿರ್ವಹಣೆ | 25.00 |
| | ಒಟ್ಟು | 476.25 |
| | **ಅಲ್ಪಸಂಖ್ಯಾತರ ಇಲಾಖೆ** | |
| 1 | 2225–00–103–0–34 –ಅಲ್ಪಸಂಖ್ಯಾತರ ಹಾಸ್ಟೆಲ್ ಗಳು | 57.00 |
| 2 | 2225–00–103–0–44–ಅಲ್ಪಸಂಖ್ಯಾತರಿಗಾಗಿ ತರಬೇತಿ ಮತ್ತು ಕಾನೂನು ಪದವೀಧರರಿಗೆ ಶಿಷ್ಯವೇತನ | 1.64 |
| 3 | 2225–00–103–0–54–ಅಲ್ಪಸಂಖ್ಯಾತರಿಗಾಗಿ ವೃತ್ತಿಪರ ತರಬೇತಿ | 1.50 |
| | ಒಟ್ಟು | 60.14 |

2012–13ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.

**3.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:**

ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು 2012–13ನೇ ಸಾಲಿಗೆ ಲಿಂಕ್ ಪುಸ್ತಕದಲ್ಲಿ ಇಲಾಖೆಯ ವಿವಿಧ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ವಿವರಗಳನ್ನು ಸಭೆಗೆ ನೀಡಿದರು.

| ಕ್ರಸಂ | ಲೆಕ್ಕಶೀರ್ಷಿಕೆ/ ಯೋಜನೆಯ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2211–00–102–0–29–ನಿರ್ಗತಿಕ ಅನಾಥ ಮಕ್ಕಳ ಕುಟೀರಗಳು | 4.80 |
| 2 | 2211–00–102–0–26–ಅಂಗನವಾಡಿ ಕಾರ್ಯಕರ್ತೆ ಸಹಾಯಕಿಯರ ಹೆಚ್ಚುವರಿ ಗೌರವಧನ | 616.20 |
| 3 | 2211–00–102–0–02–ಐ.ಸಿ.ಡಿ.ಎಸ್. ಘಟಕ | 38.28 |
| 4 | 2235–02–101–0–28 | 20.00 |

2012–13ನೇ ಸಾಲಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ನಿರ್ಣಯಿಸಲಾಯಿತು.

# ದಿನಾಂಕ: 28-06-2012ರಂದು ಪೂರ್ವಾಹ್ನ: 11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀ ಎಂ.ಕೆ.ದೇವಪ್ಪಮಲ್ಲಿಗೆವಾಳು
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ :05 ಗೈರು ಹಾಜರಿ:02

<table>
<tr><th>ಕ್ರಸಂ</th><th>ವಿಷಯ</th><th>ಚರ್ಚೆ</th><th>ತೀರ್ಮಾನ</th></tr>
<tr><td></td><td colspan="3">ಉಪ ಕಾರ್ಯದರ್ಶಿ(ಆಡಳಿತ) ರವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಅಧ್ಯಕ್ಷರನ್ನು ಕೋರಿದರು.</td></tr>
<tr><td>1</td><td>2012-13ನೇ ಸಾಲಿಗೆ ನಿಗದಿಯಾದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ವ್ಯಾಪ್ತಿಗೊಳಪಡುವ ಇಲಾಖೆಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.</td><td>ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಗೆ ಒಳಪಡುವ ವಿವಿಧ ಇಲಾಖೆಗಳ ಕ್ರಿಯಾ ಯೋಜನೆಗಳನ್ನು ಸಭೆಯಲ್ಲಿ ಮಂಡಿಸಲಾಯಿತು. ವಿವರಗಳು ಕೆಳಕಂಡಂತಿವೆ.<br>1. <u>ಸಮಾಜ ಕಲ್ಯಾಣ ಇಲಾಖೆ:</u><br>ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಯವರು ಮಾತನಾಡುತ್ತಾ, 2012-13ನೇ ಸಾಲಿಗೆ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಬಗ್ಗೆ ಕೆಳಕಂಡಂತೆ ವಿವರಗಳನ್ನು ನೀಡಿದರು.
<table>
<tr><th>ಕ್ರಸಂ</th><th>ಲೆಕ್ಕಶೀರ್ಷಿಕೆ/ ಯೋಜನೆಯ ವಿವರ</th><th>ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>2225-00-101-0-30-ಕಾರ್ಯನಿರ್ವಾಹಕ ಸಿಬ್ಬಂದಿ</td><td>27.170</td></tr>
<tr><td>2</td><td>2225-00-101-0-29-ಮೆ.ನಂತರದ ಸರ್ಕಾರಿ ವಿದ್ಯಾರ್ಥಿನಿಲಯಗಳ ಹಾಗೂ ಕಟ್ಟಡಗಳ ನಿರ್ವಹಣೆ</td><td>181.730</td></tr>
<tr><td>3</td><td>2225-00-101-0-37-ಶ್ರೇಷ್ಠತೆ ಪಡೆದ ಪ.ಜಾತಿ ವಿದ್ಯಾರ್ಥಿಗಳಿಗೆ ಸಹಾಯಧನ</td><td>10.000</td></tr>
<tr><td>4</td><td>2225-00-101-0-06-ವೈದ್ಯಕೀಯ/ ತಾಂತ್ರಿಕ ಕಾಲೇಜು ಗಳಿಗೆ ಪುಸ್ತಕ ಭಂಡಾರ (ರಾಜ್ಯ 5.00 + ಕೇಂದ್ರ 5.00)</td><td>10.000</td></tr>
<tr><td>5</td><td>2225-00-102-0-38-ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಮೆ.ನಂತರದ ವಿದ್ಯಾರ್ಥಿ ವೇತನ</td><td>5.000</td></tr>
<tr><td>6</td><td>2225-00-102-0-08-ಪ.ವರ್ಗದ ವಿದ್ಯಾರ್ಥಿಗಳಿಗೆ ವೈದ್ಯಕೀಯ/ ತಾಂತ್ರಿಕ ಕಾಲೇಜುಗಳಲ್ಲಿ ಪುಸ್ತಕ ಭಂಡಾರ ಸ್ಥಾಪನೆ (ರಾಜ್ಯ 2.50 + ಕೇಂದ್ರ 2.50)</td><td>5.000</td></tr>
<tr><td>7</td><td>2225-00-102-0-33-ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳ ನಿರ್ವಹಣೆ</td><td>29.530</td></tr>
<tr><td></td><td>ಒಟ್ಟು</td><td>268.430</td></tr>
</table></td><td>ಸಭೆಯಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ವ್ಯಾಪ್ತಿಗೊಳ ಪಡುವ ಇಲಾಖೆಗಳ 2012-13ನೇ ಸಾಲಿನ ಕ್ರಿಯಾ ಯೋಜನೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.<br>2012-13ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ನಿರ್ಣಯಿಸಲಾಯಿತು.</td></tr>
</table>

5. ಶ್ರೀಮತಿ ಮಂಜುಳಬೈರಾಜು, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
6. ಶ್ರೀಮತಿ ವಸಂತ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
7. ಶ್ರೀ ಎ.ಬಿ.ನಂಜುಂಡೇಗೌಡ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
8. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
9. ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ ಇವರ ಆಪ್ತಶಾಖೆಗೆ ಮಾಹಿತಿಗಾಗಿ
10. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
11. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ
12. ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
13. ಉಪ ಕಾರ್ಯದರ್ಶಿ(ಅಭಿವೃದ್ದಿ), ಜಿಲ್ಲಾ ಪಂಚಾಯಿತಿ, ಹಾಸನ.
14. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
15. ಮುಖ್ಯ ಯೋಜನಾಧಿಕರಿ, ಜಿಲ್ಲಾ ಪಂಚಾಯಿತಿ, ಹಾಸನ.
16. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ, ಹಾಸನ.
17. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಹಾಸನ.
18. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಬಿವೃದ್ದಿ ಇಲಾಖೆ, ಹಾಸನ.
19. ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ದಿ ನಿಗಮ ಮತ್ತು ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ದಿ ನಿಗಮ, ಹಾಸನ.
20. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
21. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಸನ ಮತ್ತು ಚನ್ನರಾಯಪಟ್ಟಣ
22. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
23. ಉಪನಿರ್ದೇಶಕರು, ಮೂಲ ಸೌಕರ್ಯಗಳ ಇಲಾಖೆ, ಹಾಸನ.
24. ಕಚೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ

ಸಂಖ್ಯೆ: ಜಿ.ಪಂ.ಹಾ/ಪ.ಶಾ/10 /2012-13

ದಿನಾಂಕ: 22-06-2012

## ಸಭಾಹ್ವಾನ ಪತ್ರ

ಶ್ರೀ ಎಂ.ಕೆ. ದೇವಪ್ಪ ಮಲ್ಲಿಗೆವಾಳು, ಅಧ್ಯಕ್ಷರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ, ಇವರ ಅಧ್ಯಕ್ಷತೆಯಲ್ಲಿ ದಿ: 28-06-2012ರಂದು ಗುರುವಾರ ಬೆಳಿಗ್ಗೆ 11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯನ್ನು ಕರೆಯಲಾಗಿದೆ. ಸದರಿ ಸಭೆಗೆ ಸಮಿತಿ ಸದಸ್ಯರುಗಳು ಸಕಾಲಕ್ಕೆ ಹಾಜರಾಗಬೇಕೆಂದು ಕೋರಿದೆ.

ಉಪ ಕಾರ್ಯದರ್ಶಿ(ಆಡಳಿತ),<br>
ಹಾಗೂ ಸದಸ್ಯ ಕಾರ್ಯದರ್ಶಿ,<br>
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ,<br>
ಜಿಲ್ಲಾ ಪಂಚಾಯಿತಿ, ಹಾಸನ.

ೆಯಲ್ಲಿ ಚರ್ಚಿಸಬೇಕಾದ ವಿಷಯಗಳು;

1. ವಿವಿಧ ಇಲಾಖೆಗಳ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, 2012-13ನೇ ಸಾಲಿನ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡುವ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಯನ್ನು:

1. ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳು, ಅಧ್ಯಕ್ಷರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
2. ಶ್ರೀಮತಿ ಜ್ಯೋತಿ ಗುರುದೇವ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
3. ಶ್ರೀಮತಿ ಎಸ್.ಎಲ್.ನಾಗಮಣಿ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
4. ಶ್ರೀಮತಿ ಪಾರ್ವತಮ್ಮ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ